<u>ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ ದ ನ್ಯಾದಂ. ರವರ ನ್ಯಾಯಾಲಯ, ಪಿರಿಯಾಪಟ್ಟಣ.</u>

**ಸಿ.ಸಿ. ಸಂಃ 84/2018**

| | | |
|---|---|---|
| ಸಾಕ್ಷಿಯ ಹೆಸರುಃ | ಸ್ವಾಮಿ | ಫ್ರಾಸಾಃಃ 1 |
| ತಂದೆಯ ಹೆಸರುಃ | ಶಿವರಾಮು | ಚಾಸಾಃಃ 1 |
| ವಯಸ್ಸುಃ | 38 ವರ್ಷ | ಪ್ರಮಾಣೀಕರಿಸಿದ ದಿಃ 29.07.2026 |
| ಉದ್ಯೋಗಃ | ಖಾಸಗಿ ಉದ್ಯೋಗಿ | |
| ವಾಸ ಸ್ಥಳಃ | ಹುಣಸೂರು | |

<u>ಮುಖ್ಯ ವಿಚಾರಣೆಃ ಸಸಅ ರಿಂದಃ</u>

1. ಚಾಸಾ-2 ನನ್ನ ಹೆಂಡತಿ. ಆರೋಪಿತನ ಪರಿಚಯ ಇರುತ್ತದೆ. ನಮ್ಮ ಮತ್ತು ಆರೋಪಿತರ ನಡುವೆ ಯಾವುದೇ ಗಲಾಟೆಯಾಗಿರುವುದಿಲ್ಲ. ಆರೋಪಿತ ನನಗೆ ಅವಾಚ್ಯಶಬ್ದಗಳಿಂದ ಬೈದಿರುವುದಿಲ್ಲ ಮತ್ತು ಕೊಲೆ ಬೆದರಿಕೆ ಹಾಕಿರುವುದಿಲ್ಲ. ದೊಣ್ಣೆಯಿಂದ ಹಲ್ಲೆ ಮಾಡಿರುವುದಿಲ್ಲ, ಕೈಯಿಂದ ಹೊಡೆದಿರುವುದಿಲ್ಲ ಮತ್ತು ನನ್ನ ಕತ್ತಿನ ಪಟ್ಟಿ ಹಿಡಿದು ಎಳೆದಿರುವುದಿಲ್ಲ. ನನ್ನ ಮತ್ತು ಆರೋಪಿತನ ನಡುವೆ ಬಾಯಿಮಾತಿನ ಚಕಾಮಕಿಯಾಗಿದ್ದು ಈ ಬಗ್ಗೆ ಪೊಲೀಸ್ ಠಾಣೆಗೆ ಹೋಗಿ ಈ ಬಗ್ಗೆ ತಿಳಿಸಿದ್ದು ಆ ಸಮಯದಲ್ಲಿ ಪೊಲೀಸರು ನನ್ನ ಸಹಿಯನ್ನು ಪಡೆದಿರುತ್ತಾರೆ. ಅದರಲ್ಲಿ ಏನು ಬರೆದಿರುತ್ತದೆ ಎಂದು ನನಗೆ ಗೊತ್ತಿಲ್ಲ. ಸಾಕ್ಷಿಗೆ ದೂರನ್ನು ತೋರಿಸಲಾಗಿ ಸಾಕ್ಷಿಯು ದೂರು ಮತ್ತು ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ-1 ಮತ್ತು 1(ಎ) ಎಂದು ಗುರುತಿಸಲಾಯಿತು. ಪೊಲೀಸರು ಯಾವುದೇ ಪಂಚನಾಮೆಯನ್ನು ತಯಾರಿಸಿರುವುದಿಲ್ಲ ಮತ್ತು ಪಂಚನಾಮೆ ಕಾಲಕ್ಕೆ ಯಾವುದೇ ದೊಣ್ಣೆಯನ್ನು ಅಮಾನತ್ತುಪಡಿಸಿರುವುದಿಲ್ಲ ಸಾಕ್ಷಿಯು ಪಂಚನಾಮೆ ಮತ್ತು ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ-2 ಮತ್ತು 2(ಎ) ಎಂದು ಗುರುತಿಸಲಾಯಿತು. ನಿಪಿ-2 ರಲ್ಲಿ ಏನು ಬರೆದಿರುತ್ತದೆ ಎಂದು ನನಗೆ ಗೊತ್ತಿಲ್ಲ. ಪೊಲೀಸರ ಕೋರಿಕೆ ಮೇರೆಗೆ ನಾನು ಪೊಲೀಸ್ ಠಾಣೆಯಲ್ಲಿ ನಿಪಿ-2 ಕ್ಕೆ ನನ್ನ ಸಹಿಯನ್ನು ಹಾಕಿರುತ್ತೇನೆ.

(ಈ ಸಮಯದಲ್ಲಿ ಸಹಾಯ ಸರ್ಕಾರಿ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರುತ್ತಾರೆ. ಅನುಮತಿ ನೀಡಲಾಯಿತು.)

<u>ಪಾಟೀ ಸವಾಲುಃ ಸಸಅ ರವರಿಂದಃ</u>

1. ದಿಃ 22.11.2017 ರಂದು ರಾತ್ರಿ 8 ಗಂಟೆ ಸಮಯದಲ್ಲಿ ಪಂಚವಳ್ಳಿ ಗ್ರಾಮದ ಮಹದೇವಪ್ಪನವರ ಅಂಗಡಿ ಮುಂದೆ ಹಾದು ಹೋಗಿರುವ ಪಂಚವಳ್ಳಿ-ಕಡೆಮನುಗನಹಳ್ಳಿ ರಸ್ತೆಯ ಅಂಚಿನಲ್ಲಿ ನಡೆದುಕೊಂಡು ಮನೆಗೆ ಹೋಗುತ್ತಿದ್ದಾಗ ಆರೋಪಿತನು ನನ್ನನ್ನು ಅಡ್ಡಗಟ್ಟಿ ಚಿಕ್ಕಪ್ಪನ ಹತ್ತಿರ ಏನಂತ ನನ್ನ ವಿಚಾರವನ್ನು ಹೇಳಿದೆ ಬೋಳಿಮಗನೇ, ಸೂಳೆಮಗನೆ, ಊರಿಂದ ಊರಿಗೆ ಬಂದು ಎಷ್ಟೊಂದು ಧಿಮಾಕು ಎಂಬಿತ್ಯಾದಿಯಾಗಿ ನನಗೆ ಅವಾಚ್ಯಶಬ್ದಗಳಿಂದ ಬೈದಿರುತ್ತಾನೆ ಎಂದರೆ ಸರಿಯಲ್ಲ. ನಂತರ ನನ್ನ ಕತ್ತಿನ ಪಟ್ಟಿಯನ್ನು ಹಿಡಿದು ಎಳೆದಾಡಿ ಕೈಯಿಂದ ಕಪಾಳದ ಹತ್ತಿರ ಹೊಡೆದು ನನ್ನನ್ನು ನೆಲಕ್ಕೆ ಕೆಡವಿ ದೊಣ್ಣೆಯಿಂದ ಬಲಗಾಲಿನ ಮಂಡಿ ಹತ್ತಿರ ಹೊಡೆದು ಸಾಮಾನ್ಯ ಸ್ವರೂಪದ ಗಾಯವನ್ನುಂಟು ಮಾಡಿರುತ್ತಾನೆ ಎಂದರೆ ಸರಿಯಲ್ಲ. ನಂತರದಲ್ಲಿ ಆರೋಪಿತನು ನಮ್ಮ ಮನೆ ಹತ್ತಿರ ಹೋಗಿ ಚಾಸಾ-2 ರವರಿಗೆ ನನ್ನನ್ನು ಕುರಿತು ನಿನ್ನ ಗಂಡ ಎಲ್ಲಿ ಲೋಫರ್ ಎಂದು ಅವಾಚ್ಯಶಬ್ದಗಳಿಂದ ಬೈದು ಕೈಗಳಿಂದ ಅವರ ಮೈ ಕಾಲುಗಳಿಗೆ ಹೊಡೆದು ಅವರಿಗೆ ಸಾಮಾನ್ಯ ಸ್ವರೂಪದ ಗಾಯವನ್ನುಂಟು ಮಾಡಿರುತ್ತಾನೆ ಎಂದರೆ ಸರಿಯಲ್ಲ. ಇವತ್ತಲ್ಲಾ ನಾಳೆ ನಿಮ್ಮನ್ನು ಕೊಲೆ ಮಾಡದೇ ಬಿಡುವುದಿಲ್ಲ ಎಂದು ಕೊಲೆ ಬೆದರಿಕೆ ಹಾಕಿರುತ್ತಾನೆ ಎಂದರೆ ಸರಿಯಲ್ಲ. ಈ ಬಗ್ಗೆ ನಾನು ನಿಪಿ-1 ರಂತೆ ಪೊಲೀಸರಿಗೆ ದೂರನ್ನು ನೀಡಿರುತ್ತೇನೆ ಎಂದರೆ ಸರಿಯಲ್ಲ.

2. ದಿಃ 24.11.2017 ರಂದು ಪೊಲೀಸರು ಬೆಳಿಗ್ಗೆ 10 ಗಂಟೆಗೆ ಘಟನಾ ಸ್ಥಳಕ್ಕೆ ಬಂದಿದ್ದು ಆ ಸಮಯದಲ್ಲಿ ನಾನು ತೋರಿಸಿದಂತೆ ಚಾಸಾ-3 ಮತ್ತು 6 ಪಂಚರ ಸಮಕ್ಷಮ ಘಟನಾ ಸ್ಥಳದ ಪಂಚನಾಮೆಯನ್ನು ತಯಾರಿಸಿರುತ್ತಾರೆ ಎಂದರೆ ಸರಿಯಲ್ಲ. ಆ ಸಮಯದಲ್ಲಿ ಆರೋಪಿತನು ಕೃತ್ಯಕ್ಕೆ ಬಳಸಿದ ದೊಣ್ಣೆಯನ್ನು ವಶಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ನಿಪಿ-2 ಅನ್ನು ಓದಿ ತಿಳಿದುಕೊಂಡು ಸಹಿ

ಮಾಡಿರುತ್ತೇನೆ ಎಂದರೆ ಸರಿಯಲ್ಲ. ಆರೋಪಿತನೊಂದಿಗೆ ನ್ಯಾಯಾಲಯದ ಹೊರಗೆ ಪ್ರಕರಣವನ್ನು ರಾಜಿ ಮಾಡಿಕೊಂಡಿದ್ದರಿಂದ ನ್ಯಾಯಾಲಯದಲ್ಲಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟೀ ಸವಾಲು ಆರೋಪಿತರ ವಕೀಲರಿಂದಃ

ಇಲ್ಲ.

ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಬೆರಳಚ್ಚು ಮಾಡಲಾಯಿತು
ಓದಿ ಹೇಳಿ ಕೇಳಿ ಸರಿ ಇದೆ ಎಂದು ಸಾಕ್ಷಿ ಒಪ್ಪಿಕೊಂಡಿರುತ್ತಾರೆ.

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ
ಪಿರಿಯಾಪಟ್ಟಣ